ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಉತ್ತರ ಕರ್ನಾಟಕದ ದೂದ್ ಗಂಗಾ ಯೋಜನೆ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

470 (580) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಹಾರಾಷ್ಟ್ರ ಹಾಗೂ ಉತ್ತರ ಕರ್ನಾಟಕ ರಾಜ್ಯದ ಜಂಟಿ ಸಹಭಾಗಿತ್ವದ ಉತ್ತರ ಕರ್ನಾಟಕ ಮಹಾತ್ವಾಕಾಂಕ್ಷೆ ಯೋಜನೆಯಾದ ದೂದ್‌ಗಂಗಾ ಯೋಜನೆಗೆ ಸಂಬಂಧಿಸಿದಂತೆ ಈವರೆಗೂ ಕಾಮಗಾರಿ ಪೂರ್ಣಗೊಳ್ಳದಿರುವ ಬಗ್ಗೆ ಸರ್ಕಾರದ ನಿಲುವೇನು;

(ಆ) ಈ ಜಂಟಿ ಯೋಜನೆಯನ್ನು ಯಾವಾಗ ಹಮ್ಮಿಕೊಳ್ಳಲಾಗಿತ್ತು; ಸದರಿ ಯೋಜನೆಗೆ ಅಂದಾಜು ಮಾಡಲಾಗಿದ್ದ ಒಟ್ಟು ಹಣವೆಷ್ಟು; (ವಿವರ ನೀಡುವುದು)

(ಇ) ಈ ಜಂಟಿ ಯೋಜನೆ ಪ್ರಾರಂಭವಾದಂದಿನಿಂದ ಇಲ್ಲಿಯವರೆಗೂ ವೆಚ್ಚವಾದ ಒಟ್ಟು ಹಣವೆಷ್ಟು; (ವರ್ಷವಾರು ವಿವರ ನೀಡುವುದು)

(ಈ) ಸದರಿ ಯೋಜನೆಯು ಯಾವ ಹಂತದಲ್ಲಿದೆ ಮತ್ತು ಯಾವ ಕಾಲಮಿತಿಯೊಳಗೆಯೋಜನೆಯನ್ನುಪೂರ್ಣಗೊಳಿಸಲಾಗುವುದು;

(ಉ) ಸದರಿ ಯೋಜನೆಗೆ ಸಂಬಂಧಿಸಿದಂತೆ ಮಹಾರಾಷ್ಟ್ರ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾದ ಹಣವೆಷ್ಟು; ಹಾಗೂ ಆ ಸರ್ಕಾರದೊಂದಿಗೆ ಈ ಯೋಜನೆಗೆ ಸಂಬಂಧಿಸಿದಂತೆ ನಡೆದ ಸಭೆಗಳ ಸಂಪೂರ್ಣ ವಿವರ ನೀಡುವುದು?